ಸಂ. 1576 ದಿನಾಂಕ 25/04/17 ಬೆಂಗಳೂರು

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** Auric Industries Ltd., ರವರಿಗೆ ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನ ಕಲ್ಮಂಗಿ ಗ್ರಾಮದಲ್ಲಿ 15 ಮೆ.ವ್ಯಾ. ಸಾಮರ್ಥ್ಯದ ಜೈವಿಕ ಇಂಧನ (Bio-mass) ವಿದ್ಯುತ್ ಉತ್ಪಾದನಾ ಘಟಕವನ್ನು ಸ್ಥಾಪಿಸಲು ನಿರಾಕ್ಷೇಪಣಾ ಪತ್ರ ನೀಡುವ ಬಗ್ಗೆ.

**ಓದಲಾಗಿದೆ:** ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಸಲ್ಲಿಸಿರುವ ಕಡತ ಸಂಖ್ಯೆ: ಎ–227.

* * *

**ಪ್ರಸ್ತಾವನೆ :-**

Auric Industries Ltd., ರವರಿಗೆ ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನ ಕಲ್ಮಂಗಿ ಗ್ರಾಮದಲ್ಲಿ 15 ಮೆ.ವ್ಯಾ. ಸಾಮರ್ಥ್ಯದ ಜೈವಿಕ ಇಂಧನ (Bio-mass) ವಿದ್ಯುತ್ ಉತ್ಪಾದನಾ ಘಟಕವನ್ನು ಸ್ಥಾಪಿಸಿ, ಸದರಿ ಘಟಕದಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಸರ್ಕಾರಕ್ಕೆ ಮಾರಾಟ ಮಾಡಲು ಅನುಮತಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಯೋಜನೆಯ ಸ್ಥಳದ ವಿವರಗಳು ಮತ್ತು ಈ ಕೆಳಕಂಡ ಮಾಹಿತಿಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಏಕ ಕಡತ ಪದ್ಧತಿಯಡಿ ಮೇಲೆ ಓದಲಾದ ಕಡತದಲ್ಲಿ ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

| | | |
|---|---|---|
| Project Name | : | Auric Industries Limited. |
| Company Identification Number | : | U23200DL2014PLC274610 |
| Project Location | : | Kalamangi Village, Sindhanoor Tq., Raichur Dist., |
| Installed Capacity in MWs | : | 15 |
| Exportable Capacity in MWs | : | 15 |
| Geographical Coordinates | : | Latitude : 15°44'3.69"<br>Longitude: 76°33'17.06" |
| Application Fee Paid | : | Rs. 18,97,500/- |
| Boiler Capacity in MWs | : | 65 TPH |
| Type of Land | : | Private Land |
| Sub Station | : | 110/33 KV at Turvihal Village |
| Distance from Project site | : | 4 Kmts. |

ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 102 ಎನ್‌ಸಿಇ 2017**

**ಬೆಂಗಳೂರು, ದಿನಾಂಕ: 20.04.2017.**

GM (Tech) I/C KREDL

Auric Industries Ltd., ರವರಿಗೆ ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನ ಕಲ್ಮಂಗಿ ಗ್ರಾಮದಲ್ಲಿ 15 ಮೆ.ವ್ಯಾ. ಸಾಮರ್ಥ್ಯದ ಜೈವಿಕ ಇಂಧನ (Bio-mass) ವಿದ್ಯುತ್ ಉತ್ಪಾದನಾ ಘಟಕವನ್ನು ಸ್ಥಾಪಿಸಿ, ಸದರಿ ಘಟಕದಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಸರ್ಕಾರಕ್ಕೆ ಮಾರಾಟ ಮಾಡಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ **ನಿರಾಕ್ಷೇಪಣೆಯನ್ನು** ನೀಡಲಾಗಿದೆ.

1. Auric Industries Ltd., ರವರು ಸದರಿ ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಪರವಾನಿಗೆ/ಅನುಮತಿ/ಅನುಮೋದನೆಗಳನ್ನು ಸಂಬಂಧಿಸಿದ ಇಲಾಖೆಗಳ/ಸಂಸ್ಥೆಗಳ/ಸಕ್ಷಮ ಪ್ರಾಧಿಕಾರಗಳಿಂದ ಪಡೆದುಕೊಳ್ಳತಕ್ಕದ್ದು;

...2)

2. Auric Industries Ltd., ರವರು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದಿಂದ ವಿದ್ಯುತ್ ರವಾನೆ ಸಂಬಂಧ (Evacuation of Power) ಪ್ರತ್ಯೇಕವಾಗಿ ಅನುಮೋದನೆ ಪಡೆಯತಕ್ಕದ್ದು;
3. ಪ್ರಸ್ತಾಪಿತ ಜೈವಿಕ ಇಂಧನ (Bio-mass) ವಿದ್ಯುತ್ ಉತ್ಪಾದನಾ ಘಟಕದಲ್ಲಿ ಉತ್ಪತ್ತಿಯಾಗುವ ವಿದ್ಯುತ್‌ನ್ನು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಗೆ ಮಾರಾಟ ಮಾಡುವ ಕುರಿತು ವಿದ್ಯುತ್ ಖರೀದಿ ಒಪ್ಪಂದವನ್ನು (ಪಿಪಿಎ) ಮಾಡಿಕೊಳ್ಳತಕ್ಕದ್ದು;
4. Auric Industries Ltd., ರವರು ಉದ್ದೇಶಿತ ಜೈವಿಕ ಇಂಧನ (Bio-mass) ವಿದ್ಯುತ್ ಉತ್ಪಾದನಾ ಘಟಕವನ್ನು ಸ್ಥಾಪಿಸಲು ಅಗತ್ಯವಿರುವ ಜಮೀನನ್ನು ಸ್ವತಃ ವ್ಯವಸ್ಥೆ ಮಾಡಿಕೊಳ್ಳತಕ್ಕದ್ದು. ಸರ್ಕಾರದಿಂದ ಈ ಸಂಬಂಧ ಯಾವುದೇ ರೀತಿಯಲ್ಲಿ ಜಮೀನನ್ನು ಮಂಜೂರಾತಿ ಮಾಡಲಾಗುವುದಿಲ್ಲ;
5. Auric Industries Ltd., ರವರು ಪ್ರಸ್ತಾಪಿತ ಜೈವಿಕ ಇಂಧನ (Bio-mass) ವಿದ್ಯುತ್ ಉತ್ಪಾದನಾ ಘಟಕವನ್ನು ಸ್ಥಾಪಿಸಲು ಅಗತ್ಯವಿರುವ ಜಮೀನನ್ನು ಕರ್ನಾಟಕ ಭೂ-ಸುಧಾರಣೆ ಕಾಯ್ದೆಯನ್ವಯ ಖರೀದಿಸತಕ್ಕದ್ದು ಮತ್ತು ಸದರಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಭೂ ಪರಿವರ್ತನೆ ಮಾಡಿಕೊಂಡ ನಂತರವೇ ಜೈವಿಕ ಇಂಧನ ಘಟಕವನ್ನು ಸ್ಥಾಪಿಸತಕ್ಕದ್ದು;
6. Auric Industries Ltd., ರವರು ಈ ಸ್ಥಾವರವನ್ನು ಸ್ಥಾಪಿಸುವ ಮುನ್ನ ವಿಸ್ತೃತ ಯೋಜನಾ ವರದಿಯನ್ನು (ಡಿಪಿಆರ್) ತಯಾರಿಸಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದಿಂದ ಅನುಮೋದನೆ ಪಡೆದುಕೊಳ್ಳತಕ್ಕದ್ದು ;
7. Auric Industries Ltd., ರವರು ಸ್ಥಾಪಿಸುತ್ತಿರುವ ಸದರಿ ಜೈವಿಕ ಇಂಧನ (Bio-mass) ವಿದ್ಯುತ್ ಉತ್ಪಾದನಾ ಘಟಕಕ್ಕೆ ಸರ್ಕಾರದ 2014-19 ರ ಕೈಗಾರಿಕಾ ನೀತಿಗಳ ಪ್ರಕಾರ ಅನ್ವಯವಾಗುವ ಸವಲತ್ತುಗಳು ಲಭ್ಯವಾಗುತ್ತವೆ;
8. ಪ್ರಸ್ತಾಪಿತ ಜೈವಿಕ ಇಂಧನ (Bio-mass) ವಿದ್ಯುತ್ ಉತ್ಪಾದನಾ ಘಟಕವನ್ನು ಆದೇಶ ಹೊರಡಿಸಿದ ದಿನಾಂಕದಿಂದ 18 ರಿಂದ 24 ತಿಂಗಳೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ರದ್ದು ಮಾಡುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

**ಇವರಿಗೆ:**
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.
2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.
4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು.
6 ಜಿಲ್ಲಾಧಿಕಾರಿಗಳು, ರಾಯಚೂರು ಜಿಲ್ಲೆ, ರಾಯಚೂರು.
7 ಉಪ ಅರಣ್ಯ ಸಂರಕ್ಷಣಾಧಿಕಾರಿ, ರಾಯಚೂರು ಜಿಲ್ಲೆ, ರಾಯಚೂರು.
8 ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಕಲಬುರಗಿ.
9 Auric Industries Ltd., Farm No.11, DERA Mandi Road, Mandi Village, New Delhi-110047.
10 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
11 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
12 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
13 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.